# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164//2022-23 ದಿನಾಂಕ: 16-05-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 09-05-2022 ಸೋಮವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಮೇ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ
ಸಮಯ : ಅಪರಾಹ್ನ 4.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಕೃಷ್ಣಮೂರ್ತಿ.ಟಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 3 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಡಾ|| ಪುಷ್ಪಿತ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಶ್ರೀ ಸುನಿಲ್ ಕುಮಾರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಎಂ. ಸುರೇಶ್ | ಕಂದಾಯ ಪರಿವೀಕ್ಷರು, ವಾರ್ಡ್ ನಂ. 164 |
| 8 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 9 | ಶ್ರೀ ಯೋಗೀಶ್ | ಸೂಪರ್‌ವೈಸರ್ |
| 10 | ಶ್ರೀ ಕುಮಾರ್ | ಸಾರ್ವಜನಿಕರು |
| 11 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 12 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾ.ನಿ ಸೂಪರ್‌ವೈಸರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.



Scanned with CamScanner

1. ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಭಾಗದಿಂದ ಹಾಜರಿದ್ದ ಸೂಪರ್‌ವೈಸರ್ ಶ್ರೀ ರಾಧಕೃಷ್ಣ ರವರು ಘನತ್ಯಾಜ್ಯ ವಿಭಾಗದಿಂದ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಮಳೆಗಾಲವಾದ್ದರಿಂದ ರಸ್ತೆ ಬದಿಯ ತೋಳು ಚರಂಡಿಯನ್ನು ಸ್ವಚ್ಛಗೊಳಿಸುತ್ತಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಅಕಾಲಿಕ ಮಳೆಯಿಂದ ವಾರ್ಡ್ ವ್ಯಾಪ್ತಿಯಲ್ಲಿ ಹಲವು ಕಡೆ ಮರದ ರೆಂಬೆಕೊಂಬೆಗಳು ಬಿದ್ದಿದ್ದು, ಅವುಗಳನ್ನು ತಕ್ಷಣ ಹಾಗೂ ರಾತ್ರಿ ಪಾಳಿಯಲ್ಲಿ ತೆರವುಗೊಳಿಸಿ ಸಂಚಾರಕ್ಕೆ ಅನುವು ಮಾಡಲಾಗಿರುತ್ತದೆ ಮತ್ತು ವಿದ್ಯುತ್ ಸರಬರಾಜುಗೆ ತೊಂದರೆಯಾಗದಂತೆ ಸೂಕ್ತ ಕ್ರಮವನ್ನು ಕೈಗೊಳ್ಳಲಾಗಿರುತ್ತದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಸುನಿಲ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯ ಚೆನ್ನಮ್ಮನಕೆರೆ ಅಚ್ಚುಕಟ್ಟು ಪ್ರದೇಶದಲ್ಲಿ ಕುಡಿಯುವ ನೀರು ಮಲಿನಗೊಳ್ಳುತ್ತಿರುವುದರಿಂದ ಅನೇಕ ಕಡೆ ರಸ್ತೆ ಅಗೆತ ಮಾಡಿರುವ ಬಗ್ಗೆ ಸಂಬಂಧಪಟ್ಟ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಭಿಯಂತರರ ಗಮನಕ್ಕೆ ತರಲಾಗಿ, ಸಂಬಂಧಿಸಿದ ಅಧಿಕಾರಿಗಳು ಅಗೆತ ಮಾಡಿರುವ ರಸ್ತೆಗಳನ್ನು ಪುನರ್ ನಿರ್ಮಾಣ ಮಾಡಿಕೊಡುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ ಮತ್ತು ಮುಂದೆ ಜಲಮಂಡಳಿಗೆ ಸಂಬಂಧಿಸಿದ ಯಾವುದೇ ರಸ್ತೆ ಅಗೆತ ಕಾಮಗಾರಿಗಳನ್ನು ಕೈಗೊಳ್ಳುವ ಮುನ್ನ ಮಾಹಿತಿಯನ್ನು ನೀಡಿ ಅಗತ್ಯವಿದ್ದಲ್ಲಿ ಮಾತ್ರ ರಸ್ತೆ ಅಗೆತವನ್ನು ಕೈಗೊಂಡು ಪುನರ್ ನಿರ್ಮಾಣ ಮಾಡಿಕೊಡಬೇಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

ವಾಡ್ -164ರ ಉತ್ತರ ಭಾಗದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಶ್ರೀ ಸುದರ್ಶನ್, ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಕೆಲವು ಕಡೆ ನೀರಿನ ಕೊಳವೆ ಹೊಡೆದಿರುವುದರಿಂದ ಅವುಗಳ ದುರಸ್ಥಿ ಮಾಡಲು ರಸ್ತೆ ಅಗೆತಕ್ಕೆ ಅನುಮತಿ ನೀಡಲು ಸಭೆಯಲ್ಲಿ ಕೋರಿರುತ್ತಾರೆ. ಈ ಬಗ್ಗೆ ಅಧ್ಯಕ್ಷರು ಲಿಖಿತವಾಗಿ ಅರ್ಜಿ ನೀಡಿ ರಸ್ತೆ ಅಗೆಯಬೇಕಾಗಿದ್ದು, ಅಗೆತದ ನಂತರ ಅಗೆದ ರಸ್ತೆ ಭಾಗಗಳನ್ನು ಪುನರ್‌ನಿರ್ಮಾಣ ಮಾಡಿಕೊಡಲು ಸದರಿಯವರಿಗೆ ಸೂಚಿಸಿರುತ್ತಾರೆ.

3. ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯ ಎಲ್ಲಾ ಸ್ಥಿರಾಸ್ತಿಗಳ ಆಸ್ತಿ ತೆರಿಗೆಯನ್ನು ಸಕಾಲದಲ್ಲಿ ಪಾವತಿಸಲು ಪ್ರಚಾರ ಮಾಡಲಾಗುತ್ತಿದ್ದು, ಆಸ್ತಿ ತೆರಿಗೆ ಪಾವತಿಸಲು ಏಪ್ರಿಲ್ ತಿಂಗಳವರೆಗೂ ಇದ್ದ ಶೇ 5% ರಿಯಾಯಿತಿಯನ್ನು ಮೇ ತಿಂಗಳ ಅಂತ್ಯದವರೆಗೂ ವಿಸ್ತರಿಸಲಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಮತದಾರರ ನೋಂದಣಿ ಅಭಿಯಾನ ಹಮ್ಮಿಕೊಂಡಿದ್ದು, ಅಭಿಯಾನದಲ್ಲಿ ಹೊಸದಾಗಿ ಮತದಾರರನ್ನು ಸೇರ್ಪಡೆಗೊಳಿಸಲು ಅರ್ಜಿಗಳನ್ನು ಸ್ವೀಕರಿಸಲಾಗುತ್ತದೆ ಹಾಗೂ ಹಾಲಿ ಇರುವ ಮತದಾರರ ವರ್ಗಾವಣೆ ಮತ್ತು ಮರಣ ಹೊಂದಿರುವ ಮತದಾರರನ್ನು ಪಟ್ಟಿಯಿಂದ ತೆಗೆಯುವ ಕಾರ್ಯ ಮಾಡಲಾಗುತ್ತದೆ ಎಂದು ಸಭೆಯಲ್ಲಿ ಕಂದಾಯ ಅಧಿಕಾರಿಗಳು ವರದಿ ನೀಡಿರುತ್ತಾರೆ.

4. ಸಭೆಯಲ್ಲಿ ಹಾಜರಿದ್ದ ಶ್ರೀ ಕುಮಾರ್, ಸಾರ್ವಜನಿಕರು ರವರು ವಾರ್ಡ್ ವ್ಯಾಪ್ತಿಯಲ್ಲಿ ಬೀಳುವ ಹಂತದಲ್ಲಿರುವ ಮರದ ರೆಂಬೆಕೊಂಬೆಗಳನ್ನು ಗುರುತಿಸಿ ತೆರವುಗೊಳಿಸಲು, ಕೆಲವು ರಸ್ತೆಗಳಲ್ಲಿ ರಸ್ತೆ ಬದಿಯ ಚರಂಡಿಗಳಲ್ಲಿ ಮಳೆನೀರು ಸರಾಗವಾಗಿ ಹರಿಯದೆ ಇರುವುದರಿಂದ ಅಂತಹ ಚರಂಡಿಗಳನ್ನು ಸ್ವಚ್ಛಗೊಳಿಸಬೇಕೆಂದು ಸಭೆಯಲ್ಲಿ ನೋಡಲ್ ಅಧಿಕಾರಿಗಳಿಗೆ ಸಲಹೆಗಳನ್ನು ನೀಡಿರುತ್ತಾರೆ.



Scanned with CamScanner

5. ಸಭೆಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿನ 02 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್ ಲಸಿಕೆಯನ್ನು ಹಾಕಲಾಗುತ್ತಿದ್ದು, ಹಿರಿಯ ನಾಗರಿಕರಿಗೆ ಬೂಸ್ಟರ್ ಲಸಿಕೆಯನ್ನು ಹಾಕಲಾಗುತ್ತಿರುತ್ತದೆ ಎಂದು ಮತ್ತು 12 ವರ್ಷಕ್ಕಿಂತ ಮೇಲ್ಪಟ್ಟ ಮಕ್ಕಳಿಗೆ ಬುಧವಾರ & ಶನಿವಾರದಂದು ಲಸಿಕೆಯನ್ನು ನೀಡುತ್ತಿರುವುದಾಗಿ ಸಭೆಗೆ ತಿಳಿಸಿರುತ್ತಾರೆ. ಏಪ್ರಿಲ್ ತಿಂಗಳಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಕರೋನ ಪ್ರಕರಣಗಳು ಕಡಿಮೆಯಾಗಿದ್ದು, ಈ ಬಗ್ಗೆ ಸೂಕ್ತ ಎಚ್ಚರಿಕಾ ಕ್ರಮಗಳನ್ನು ಅನುಸರಿಸಲಾಗುತ್ತಿದೆ. ಎಂದು ತಿಳಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತದ ಪುನರ್‌ನಿರ್ಮಾಣ, ತೋಳುಚರಂಡಿಗಳ ಸ್ವಚ್ಛತೆ, ಮುರಿದ ಮರಗಳ ರೆಂಬೆಕೊಂಬೆಗಳ ನಿರ್ವಹಣೆ, ಹಾಲಿ ಕಾಮಗಾರಿಗಳ ಸ್ಥಿತಿಗತಿ ಹಾಗೂ ಮುಂದಿನ ಯೋಜನೆಗಳ ಬಗ್ಗೆ ಗಮನಹರಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ. ಮುಖ್ಯ ಆಯುಕ್ತರ ಆದೇಶದಂತೆ, ವಾರ್ಡ್ ವ್ಯಾಪ್ತಿಯಲ್ಲಿನ ಮುಖ್ಯರಸ್ತೆಗಳು ಮತ್ತು ಉಪಮುಖ್ಯರಸ್ತೆಗಳನ್ನು ವಾರಕ್ಕೊಮ್ಮೆ ಸಹಾಯಕ ಅಭಿಯಂತರರು ಹಾಗೂ ಕೆಲಸ ಪರಿವೀಕ್ಷಕರು ಖುದ್ದಾಗಿ ಪರಿಶೀಲಿಸಿ ಎಲ್ಲಾ ರಸ್ತೆಗಳು ಗುಂಡಿರಹಿತ ಇದೆಯೇ ಎಂಬ ಬಗ್ಗೆ ವರದಿ ನೀಡಲು ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ. ಈ ಬಗ್ಗೆ ಪ್ರತಿ ಶನಿವಾರ ವಾರ್ಡ್ ವ್ಯಾಪ್ತಿಯಲ್ಲಿ ಗುಂಡಿಬಿದ್ದ ರಸ್ತೆಗಳ ವಿವರಗಳನ್ನು ದಾಖಲಿಸಿ ಮತ್ತು ಕೈಗೊಂಡ ಕ್ರಮದ ಬಗ್ಗೆ ವರದಿ ನೀಡಲು ಅಧ್ಯಕ್ಷರು ಸೂಚಿಸಿರುತ್ತಾರೆ. ರಸ್ತೆ ದುರಸ್ಥಿ ಕಾಮಗಾರಿಗಳನ್ನು ಮಾನ್ಯ ಶಾಸಕರು ಮತ್ತು ವಾರ್ಡ್‌ನ ನಾಗರೀಕರೊಂದಿಗೆ ಚರ್ಚಿಸಿ ತುರ್ತಾಗಿ ಕೈಗೊಳ್ಳಬೇಕಾದ ದುರಸ್ಥಿ ಕಾಮಗಾರಿಗಳ ಪಟ್ಟಿಯನ್ನು ಮಂಡಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.



Scanned with CamScanner